ಆರ್ಯುವೇದ ಮತ್ತು ಯುನಾನಿ ವೈದ್ಯ ಮಂಡಳಿ ಇವರಿಗೆ ಅಧಿಕಾರ ನೀಡಲಾಗಿದೆ. ಈ ಬಗ್ಗೆ ಈಗಿರುವ ಕಾನೂನು ಸ್ವಲ್ಪ ಮಟ್ಟಿಗೆ ಪರಿಣಾಮಕಾರಿಯಾಗಿರುತ್ತದೆ.

ಕುಡಿಯುವ ನೀರಿನ ಗುಣಮಟ್ಟ ಮತ್ತು ನೀರಿನ ಪೂರೈಕೆಗಾಗಿ ತಾಂತ್ರಿಕ ಆಯೋಗ ನೇಮಕ

2874 - ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೂರೈಕೆ ಹಾಗೂ ನೀರಿನ ಗುಣಮಟ್ಟ ಮತ್ತು ನೈರ್ಮಲ್ಯದ ಸಮೀಕ್ಷೆಗಾಗಿ ಸರ್ಕಾರ ತಾಂತ್ರಿಕ ಆಯೋಗವನ್ನು ನೇಮಿಸಿದೆಯೇ?*

ಆ) *ಹಾಗಿದ್ದಲ್ಲಿ ತಾಂತ್ರಿಕ ಆಯೋಗ ಸಮೀಕ್ಷೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ?*

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಕರ್ನಾಟಕ ನೀರು ಸರಬರಾಜು ಮತ್ತು ನೈರ್ಮಲ್ಯ ನಿಯೋಗವನ್ನು ಸರ್ಕಾರಕ್ಕೆ ಸಲಹೆ ನೀಡುವ ಸಲುವಾಗಿ ರಚಿಸಲಾಗಿದೆ. ನೀರಿನ ಗುಣಮಟ್ಟದ ಸಮೀಕ್ಷೆಯನ್ನು ತಜ್ಞ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ.

ಆ) ವರದಿಯನ್ನು ನಿರೀಕ್ಷಿಸಲಾಗಿದೆ.

ಮಂಡ್ಯ ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದ ಅಭಿವೃದ್ಧಿ

2875 - ಶ್ರೀ ಆತ್ಮಾನಂದ ಎಂ.ಎಸ್ (ಮಂಡ್ಯ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಡ್ಯ ತಾಲ್ಲೂಕಿನ ತೂಬಿನಕೆರೆ ಬಳಿಯಲ್ಲಿ ಇರುವ ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರವನ್ನು ಯಾವಾಗ ಪ್ರಾರಂಭಿಸಲಾಯಿತು?*

ಆ) *ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದ ಸಮಗ್ರ ಅಭಿವೃದ್ಧಿಗೆ ಸರ್ಕಾರದವರು ಕಾರ್ಯಕ್ರಮಗಳನ್ನು ರೂಪಿಸಿ ಕೈಗೊಂಡಿರುವ ಕ್ರಮಗಳೇನು?*

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) :

ಅ) ಮಂಡ್ಯ ಜಿಲ್ಲೆಯ ಕೊಮ್ಮೇರನಹಳ್ಳಿ ಬಳಿ ದಿನಾಂಕ : 13-07-1992 ರಂದು ಸರ್ ಎಂ.ವಿಶ್ವೇಶಶ್ವರಯ್ಯ ಸ್ನಾತಕೋತ್ತರ ಕೇಂದ್ರವನ್ನು ಸ್ಥಾಪಿಸಲಾಗಿತ್ತು. ದಿನಾಂಕ : 15-10-1996 ರಂದು ಅದನ್ನು ತೂಬಿನಕೆರೆ ಬಳಿಯ ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ.

ಆ) ಶೈಕ್ಷಣಿಕ ಚಟುವಟಿಕೆಯನ್ನು ಉತ್ತಮಗೊಳಿಸಲು 5 ಪ್ರಾಧ್ಯಾಪಕರು, 5 ಪ್ರವಾಚಕರು ಮತ್ತು 15 ಉಪನ್ಯಾಸಕರ ಹುದ್ದೆಗಳನ್ನು ಸೃಜಿಸಲಾಗಿದೆ. ಅಭಿವೃದ್ಧಿ ಅನುದಾನ ಹಾಗೂ ಹಲವು ನಿಧಿಗಳನ್ನು ಕ್ರೋಢೀಕರಿಸಿ ಅಗತ್ಯವಾದ ಕಟ್ಟಡಗಳು, ಪೀಠೋಪಕರಣಗಳು, ದಿನನಿತ್ಯ ಪಾಠಪ್ರವಚನಕ್ಕೆ ಬೇಕಾದ ಉಪಕರಣಗಳನ್ನು ಒದಗಿಸಲಾಗಿದೆ. ವಿದ್ಯಾರ್ಥಿನಿಯರಿಗಾಗಿ 51.75 ಲಕ್ಷ ರೂ.ಗಳ ವೆಚ್ಚದಲ್ಲಿ ವಸತಿ ನಿಲಯವನ್ನು ನಿರ್ಮಿಸಲಾಗುತ್ತಿದೆ. ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯವನ್ನು ನಿರ್ಮಿಸಲು 59.25 ಲಕ್ಷ ರೂ.ಗಳ ಕೇಂದ್ರ ಸರ್ಕಾರದ ಆರ್ಥಿಕ ನೆರವನ್ನು ಕೋರಲಾಗಿದೆ. ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ಸ್ನಾತಕೋತ್ತರ ಕೇಂದ್ರದಲ್ಲಿ ಬಸ್ ನಿಲುಗಡೆಯ ವ್ಯವಸ್ಥೆ ಮಾಡಲಾಗಿದೆ.

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು

2877 - ಶ್ರೀ ಅಮರೇಗೌಡ ಬಯ್ಯಾಪುರ ಲಿಂಗನಗೌಡ (ಲಿಂಗಸುಗೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕ್ಷೇತ್ರಾಭಿವೃದ್ಧಿ ಅಧಿಕಾರಿಗಳು ನೇರವಾಗಿ ಆಯ್ಕೆಗೊಂಡು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಎಲ್ಲೆಲ್ಲಿ ಕೆಲಸ ಮಾಡುತ್ತಿದ್ದಾರೆ? ಅವರಲ್ಲಿ ಕೆಲವರು ಸಮಾನಾಂತರ ಹುದ್ದೆಯ ಬೇರೆ ಇಲಾಖೆಗಳ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆಯೇ?

ಆ) ಯಾವ ಯಾವ ತಾಲ್ಲೂಕು ಪಂಚಾಯತ್ ಸಮಿತಿಗಳ ಕಾರ್ಯನಿರ್ವಾಹಕ ಹುದ್ದೆಗಳು ಖಾಲಿಯಾಗಿ ಉಳಿದಿವೆ? ಇವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮ ಏನು?

ಇ) ಯಾವ ಯಾವ ಇಲಾಖೆಯವರು ಇಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಅವರ ಸಂಖ್ಯೆ ಎಷ್ಟು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ವಿವರಗಳನ್ನು ಅನುಬಂಧ1ರಲ್ಲಿ ಲಗತ್ತಿಸಿದೆ. ಇಬ್ಬರು ಅಧಿಕಾರಿಗಳು ಬೇರೆ ಇಲಾಖೆಯಲ್ಲಿ ಸಮಾನಾಂತರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಆ) ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳನ್ನು ಈ ಕೆಳಗೆ ವಿವರಿಸಿರುವ ವಿಧಾನದಿಂದ ಭರ್ತಿ ಮಾಡಲಾಗುವುದು.

1. ಶೇ. 40 ಅಂದರೆ 70 ಅಧಿಕಾರಿಗಳನ್ನು ಕೆಎಎಸ್ (ಕಿರಿಯ ಶ್ರೇಣಿ)

2. 2. ಶೇ. 40 ಅಂದರೆ 70 ಅಧಿಕಾರಿಗಳು ಗ್ರಾಅಪ ಇಲಾಖೆಯಿಂದ

3. 3. ಶೇ. 20 ಅಂದರೆ 35 ಅಧಿಕಾರಿಗಳು ಇತರೆ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಂದ. ವಿವರಗಳನ್ನು ಅನುಬಂಧ 2ರಲ್ಲಿ ಲಗತ್ತಿಸಿದೆ.

ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯನ್ನು ಕೆಎಎಸ್ (ಕಿರಿಯ ಶ್ರೇಣಿ) ಅಧಿಕಾರಿಗಳ ಸೇವೆಯನ್ನು ನೀಡುವಂತೆ ಕೋರಲಾಗಿದೆ.